## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2030

ಉತ್ತರಿಸಬೇಕಾಗಿದ್ದ ದಿನಾಂಕ : 27.03.2020

ಸದಸ್ಯರ ಹೆಸರು : ಶ್ರೀ ಐವನ್ ಡಿ ಸೋಜಾ

ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಎಷ್ಟು ವಿದ್ಯಾರ್ಥಿಗಳು ಕ್ರೀಡಾ ಹಾಸ್ಟೆಲ್ ಗಳಲ್ಲಿ ಪ್ರವೇಶ ಪಡೆದಿದ್ದಾರೆ;<br><br>ಅವರಿಗೆ ನೀಡುವ ಸೌಲಭ್ಯಗಳಾವುವು; (ವಿವರ ನೀಡುವುದು) | 2019-20 ನೇ ಸಾಲಿನಲ್ಲಿ ರಾಜ್ಯದಲ್ಲಿನ 34 ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಒಟ್ಟು 2142 ಕ್ರೀಡಾಪಟುಗಳು ಪ್ರವೇಶ ಪಡೆದಿರುತ್ತಾರೆ.<br><br>ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿರುವ ಕ್ರೀಡಾಪಟುಗಳಿಗೆ ಉಚಿತ ವಸತಿ, ಊಟೋಪಹಾರ, ಕ್ರೀಡಾ ತರಬೇತಿ, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ ಮತ್ತು ದಿನಭತ್ಯೆ, ಕ್ರೀಡಾ ಸಮವಸ್ತ್ರ, ಕ್ರೀಡಾ ಸಾಧನೆಗೆ ನಗದು ಪ್ರೋತ್ಸಾಹಧನ ಸೌಲಭ್ಯ ನೀಡಲಾಗುತ್ತಿದೆ. |
| ಆ | ಕ್ರೀಡಾ ಕ್ಷೇತ್ರದಲ್ಲಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರದ ಮುಂದಿರುವ ಯೋಜನೆಗಳಾವುವು; ಇದಕ್ಕೆ ವಿನಿಯೋಗಿಸುವ ಹಣ ಎಷ್ಟು? (ವಿವರ ನೀಡುವುದು) | **ಕ್ರೀಡಾ ಕ್ಷೇತ್ರದಲ್ಲಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕೆಳಕಾಣಿಸಿದ ಯೋಜನೆಗಳನ್ನು ರೂಪಿಸಲಾಗಿದೆ:-**<br><br>1) **ಕ್ರೀಡಾ ವಿದ್ಯಾರ್ಥಿ ವೇತನ** : ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಅಥವಾ ರಾಷ್ಟ್ರಮಟ್ಟದಲ್ಲಿ ಭಾಗವಹಿಸಿದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.<br>2) **ಶೈಕ್ಷಣಿಕ ಶುಲ್ಕ ಮರುಪಾವತಿ** : ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಪದಕ ಪಡೆದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.<br>3) **ನಗದು ಪುರಸ್ಕಾರ** : ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ನಿಯಮಾನುಸಾರ ನಗದು ಪುರಸ್ಕಾರ ನೀಡಲಾಗುತ್ತಿದೆ. |

<table>
<tr>
<td></td>
<td></td>
<td>
4) ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸ್ : ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸ್ ಯೋಜನೆಯಡಿಯಲ್ಲಿ ಪ್ರತಿಭಾನ್ವಿತ ಕ್ರೀಡಾಪಟುಗಳ ಉನ್ನತ ಕ್ರೀಡಾ ಸಾಧನೆಗಾಗಿ ಉತ್ತೇಜಿಸಲು ಸಹಾಯಧನ ನೀಡಲಾಗುತ್ತಿದೆ.<br>
5) ವೃತ್ತಿಪರ ಕೋರ್ಸ್‌ಗಳಿಗೆ ಕ್ರೀಡಾಪಟುಗಳಿಗೆ ಪ್ರವೇಶ ಮೀಸಲಾತಿ : ರಾಷ್ಟ್ರ ಹಾಗೂ ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳು ವೃತ್ತಿಪರ ಕೋರ್ಸುಗಳಿಗೆ ಪ್ರವೇಶ ಬಯಸಿ ಸಲ್ಲಿಸಿದ ಅರ್ಜಿ/ಪ್ರಸ್ತಾವನೆಗಳನ್ನು ಮೌಲ್ಯಮಾಪನ ಮಾಡಿ ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕದ ವಿಶೇಷಾಧಿಕಾರಿಗಳಿಗೆ ಒದಗಿಸುವ ಮೂಲಕ ಪ್ರತಿಭಾವಂತ ಕ್ರೀಡಾಪಟುಗಳಿಗೆ ತಾಂತ್ರಿಕ ಹಾಗೂ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ.<br><br>
ಯುವ ಕ್ರೀಡಾಪಟುಗಳ ಉತ್ತೇಜನಕ್ಕಾಗಿ 2019-20 ನೇ ಸಾಲಿನಲ್ಲಿ ವಿನಿಯೋಗಿಸಿದ ಅನುದಾನದ ವಿವರ.
<table>
<tr><th>ಕ್ರ. ಸಂ.</th><th>ವಿವರ</th><th>ಕ್ರೀಡಾಪಟುಗಳ ಸಂಖ್ಯೆ</th><th>ವಿನಿಯೋಗಿಸಲಾದ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>ಕ್ರೀಡಾ ವಿದ್ಯಾರ್ಥಿ ವೇತನ</td><td>473</td><td>52.20</td></tr>
<tr><td>2</td><td>ಶೈಕ್ಷಣಿಕ ಶುಲ್ಕ ಮರು ಪಾವತಿ</td><td>269</td><td>136.69</td></tr>
<tr><td>3</td><td>ನಗದು ಪುರಸ್ಕಾರ</td><td>879</td><td>841.00</td></tr>
<tr><td></td><td>ಒಟ್ಟು</td><td></td><td>1029.89</td></tr>
</table>
</td>
</tr>
<tr>
<td>ಇ</td>
<td>ಮಂಗಳೂರಿನಲ್ಲಿ ಎಷ್ಟು ಕ್ರೀಡಾ ಹಾಸ್ಟೆಲ್ ಗಳು ಕಾರ್ಯನಿರ್ವಹಿಸುತ್ತಿವೆ; ಎಷ್ಟು ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗಿದೆ; (ವಿವರ ನೀಡುವುದು)</td>
<td>ಮಂಗಳೂರಿನಲ್ಲಿ ಒಂದು ಕ್ರೀಡಾ ವಸತಿ ನಿಲಯವಿದೆ. 2019-20 ನೇ ಸಾಲಿನಲ್ಲಿ ಅಥ್ಲೆಟಿಕ್ಸ್ ಕ್ರೀಡಾ ವಿಭಾಗದಲ್ಲಿ ಒಟ್ಟು 22 ಕ್ರೀಡಾಪಟುಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ.</td>
</tr>
</table>

| | | |
|---|---|---|
| ಈ | ಕ್ರೀಡಾ ಹಾಸ್ಟೆಲ್ ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕ್ರೀಡಾ ವಿದ್ಯಾರ್ಥಿಗಳ ಭದ್ರತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು/ (ವಿವರ ನೀಡುವುದು) | ರಾಜ್ಯದ ಎಲ್ಲಾ ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಕ್ರೀಡಾಪಟುಗಳ ವಾಸ್ತವ್ಯ ಹಾಗೂ ಕ್ರೀಡಾ ತರಬೇತಿಗೆ ಅಗತ್ಯವಾದ ಕನಿಷ್ಟ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಿ, ಕ್ರೀಡಾ ವಸತಿ ನಿಲಯಗಳ ಸೌಲಭ್ಯಗಳನ್ನು ಮೇಲ್ದರ್ಜೆಗೇರಿಸಲು ಹಂತ-ಹಂತವಾಗಿ ಕ್ರಮ ವಹಿಸಲಾಗುತ್ತಿದೆ. ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಕ್ಷೇಮಪಾಲಕರ ಸೇವೆಯನ್ನು ಒದಗಿಸಲಾಗಿದ್ದು, ದಿನದ 24 ಗಂಟೆ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿರುತ್ತವೆ. |

**ವೈಎಸ್ ಡಿ-/ಇಬಿಬಿ/77/2020**

**(ಸಿ. ಟಿ. ರವಿ)**
ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ
ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.